ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	106
ಮಾನ್ಯ ಸದಸ್ಯರ ಹೆಸರು	ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	21.09.2020
ಉತ್ತರಿಸುವ ಸಚಿವರು	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ	ಬೀದರ್ ಜಿಲ್ಲೆಯಲ್ಲಿ ಸಾರ್ವಜನಿಕರಿಗಾಗಿ ಜಾರಿಯಲ್ಲಿರುವ ಉಚಿತ ಆರೋಗ್ಯ ಯೋಜನೆಗಳಾವುವು; (ಸ್ಪಷ್ಟ ಮಾಹಿತಿ ಒದಗಿಸುವುದು)	ರಾಜ್ಯದ ಎಲ್ಲಾ ನಿವಾಸಿಗಳಿಗೆ/ಸಾರ್ವಜನಿಕರಿಗಾಗಿ (ಬೀದರ್ ಜಿಲ್ಲೆ ಒಳಗೊಂಡಂತೆ) ಉಚಿತ ಆರೋಗ್ಯ ಸೌಲಭ್ಯ ಒದಗಿಸಲು ಈ ಕೆಳಕಂಡ ಯೋಜನೆಗಳು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನಿಂದ ಅನುಷ್ಠಾನಗೊಳಿಸಲಾಗುತ್ತಿದೆ; 1.ಆಯುಷ್ಮಾನ್ ಭಾರತ್–ಆರೋಗ್ಯ ಕರ್ನಾಟಕ ಯೋಜನೆ 2.ಅಂಗಾಂಗ ಕಸಿ ಯೋಜನೆ ಈ ಎರಡು ಯೋಜನೆಗಳು ಪ್ರಸ್ತುತ ಜಾರಿಯಲ್ಲಿದೆ. (ಯೋಜನೆಗಳ ಬಗ್ಗೆ ಸ್ಪಷ್ಟ ಮಾಹಿತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ)
ಆ	ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಉಚಿತ ಆರೋಗ್ಯ ಯೋಜನೆಗಳನ್ನು ಬೀದರ್ ಜಿಲ್ಲೆಯಲ್ಲಿ ಅಳವಡಿಸಿಕೊಳ್ಳಲಾಗಿದೆಯೇ; (ವಿವರ ನೀಡುವುದು)	ಹೌದು. ಕೇಂದ್ರ ಸರ್ಕಾರವು ಉಚಿತ ಆರೋಗ್ಯ ಯೋಜನೆಯಾದ ಆಯುಷ್ಮಾನ್ ಭಾರತ್ ಯೋಜನೆಯನ್ನು ದಿ:30.10.2018ರಂದು ಜಾರಿಗೆ ತಂದಿರುತ್ತದೆ. ರಾಜ್ಯ ಸರ್ಕಾರದ ಆರೋಗ್ಯ ಕರ್ನಾಟಕ ಯೋಜನೆಯ ಉದ್ದೇಶ ಹಾಗೂ ಆಯುಷ್ಮಾನ್ ಭಾರತ್ ಯೋಜನೆಯ ಉದ್ದೇಶ, ವ್ಯಾಪ್ತಿಯಲ್ಲಿ ಹೋಲಿಕೆ ಇರುವುದರಿಂದ ಎರಡೂ ಯೋಜನೆಗಳನ್ನು ಸಂಯೋಜಿಸಿ ಆಯುಷ್ಮಾನ್ ಭಾರತ್–ಆರೋಗ್ಯ ಕರ್ನಾಟಕ ಯೋಜನೆಯನ್ನು ಜಾರಿಗೆ ತಂದಿದ್ದು (ಬೀದರ್ ಜಿಲ್ಲೆ ಒಳಗೊಂಡಂತೆ) ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನಿಂದ ಅನುಷ್ಠಾನಗೊಳಿಸಲಾಗುತ್ತಿದೆ. (ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ)

ಇ	ಸಾರ್ವಜನಿಕರಿಗಾಗಿ ಉಚಿತ ಆರೋಗ್ಯ ಯೋಜನೆಗಳನ್ನು ಯಾವ ಮಾನದಂಡವನ್ನು ಅನುಸರಿಸಿ ನೀಡಲಾಗುತ್ತಿದೆ; (ಮಾಹಿತಿ ನೀಡುವುದು)	ರಾಜ್ಯದ ಎಲ್ಲಾ ನಿವಾಸಿಗಳಿಗೆ/ಸಾರ್ವಜನಿಕರಿಗಾಗಿ (ಬೀದರ್ ಜಿಲ್ಲೆ ಒಳಗೊಂಡಂತೆ) ಉಚಿತ ಆರೋಗ್ಯ ಸೌಲಭ್ಯ ಒದಗಿಸಲು ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಿ ನೀಡಲಾಗುತ್ತಿದೆ. ಆಯುಷ್ಮಾನ್ ಭಾರತ್–ಆರೋಗ್ಯ ಕರ್ನಾಟಕ ಯೋಜನೆ: ಪಡಿತರ ಕಾರ್ಡ್ ಮತ್ತು ಆಧಾರ್ ಕಾರ್ಡ್‌ಗಳು ಯೋಜನೆಯ ಅರ್ಹತಾ ಮಾನದಂಡಗಳಾಗಿವೆ. ಯೋಜನೆಯ ಫಲಾನುಭವಿಗಳನ್ನು ಅರ್ಹತಾ ರೋಗಿ ಮತ್ತು ಸಾಮಾನ್ಯರೋಗಿ ಎಂದು ಎರಡು ವರ್ಗಗಳಾಗಿ ವಿಂಗಡಿಸಲಾಗಿದೆ: ಅ) ಅರ್ಹತಾರೋಗಿ: ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ, 2013ರಡಿ (ಬಿಪಿಎಲ್) "ಅರ್ಹ ಕುಟುಂಬ"ಕ್ಕೆ ಸೇರಿರುವರು ಹಾಗೂ ಈ ಹಿಂದೆ ಚಾಲ್ತಿಯಲ್ಲಿದ್ದ ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆಯಡಿಯಲ್ಲಿ ನೋಂದಾಯಿತಗೊಂಡಿರುವ ಕುಟುಂಬಗಳಿಗೆ ಒಂದು ವರ್ಷಕ್ಕೆ ಒಂದು ಕುಟುಂಬಕ್ಕೆ ರೂ.5.00 ಲಕ್ಷಗಳವರೆಗೆ ಉಚಿತ ಚಿಕಿತ್ಸೆ ಒದಗಿಸಲಾಗುವುದು. ಆ) ಸಾಮಾನ್ಯರೋಗಿ: ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ, 2013ರಡಿ "ಅರ್ಹ ಕುಟುಂಬಕ್ಕೆ" ಸೇರಿಲ್ಲದೇ ಇರುವವರು. ಇವರಿಗೆ ಸರ್ಕಾರಿ ಪ್ಯಾಕೇಜ್ ದರದ ಶೇ.30% ರಷ್ಟಿದ್ದು, ಸಹ–ಪಾವತಿಯ ಆಧಾರದ ಮೇಲೆ ಒಂದು ವರ್ಷಕ್ಕೆ ಒಂದು ಕುಟುಂಬಕ್ಕೆ ರೂ.1.50 ಲಕ್ಷ ಇರುತ್ತದೆ. ಅಂಗಾಂಗ ಕಸಿ ಯೋಜನೆ: ಪಡಿತರಕಾರ್ಡ್ (ಬಿಪಿಎಲ್) ಮತ್ತು ಆಧಾರ್ ಕಾರ್ಡ್‌ಗಳು ಯೋಜನೆಯ ಅರ್ಹತಾ ಮಾನದಂಡಗಳಾಗಿವೆ.
ಈ	ಉಚಿತ ಆರೋಗ್ಯ ಯೋಜನೆಯನ್ನು ಪಡೆದು ಆರೋಗ್ಯ ಕಾರ್ಡ್ ಪಡೆಯಲು ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ಒದಗಿಸುವುದು)	ಬಂದಿದೆ. ಆಯುಷ್ಮಾನ್ ಭಾರತ್–ಆರೋಗ್ಯ ಕರ್ನಾಟಕ ಯೋಜನೆಯು ಅಕ್ಟೋಬರ್ 2018 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುತ್ತಿದೆ. ನೂತನ ಯೋಜನೆಯಾಗಿರುವುದರಿಂದ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮತ್ತು ಆರೋಗ್ಯ ಕಾರ್ಡ್ ವಿತರಿಸಲು ಈಗಾಗಲೇ ವ್ಯಾಪಕ ಕ್ರಮ ಕೈಗೊಳ್ಳಲಾಗಿದ್ದು, ಸಾರ್ವಜನಿಕರಿಗೆ ತೊಂದರೆಯಾಗದಂತೆ ಎಲ್ಲಾ ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಕರ್ನಾಟಕ ಒನ್, ಬೆಂಗಳೂರು ಒನ್, ಸೇವಾ ಸಿಂಧು ಕೇಂದ್ರಗಳು, ಕಾಮನ್ ಸರ್ವಿಸ್

		ಕೇಂದ್ರಗಳು ಹಾಗೂ ಬಾಪೂಜಿ ಸೇವಾ ಕೇಂದ್ರಗಳು ಮುಂತಾದ ಹದಿನೈದು ಸಾವಿರಕ್ಕಿಂತ ಹೆಚ್ಚು ಕೇಂದ್ರಗಳಿಂದ ಕಾರ್ಡ್‌ಗಳನ್ನು ವಿತರಿಸಲು ಕ್ರಮ ವಹಿಸಲಾಗಿದೆ. ಅಲ್ಲದೆ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಶಿಬಿರಗಳನ್ನು ಏರ್ಪಡಿಸಿ ಯೋಜನೆಯ ಬಗ್ಗೆ ಪ್ರಚಾರ ಹಾಗೂ ಕಾರ್ಡ್ ವಿತರಣೆಯ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಕೂಡ ಸಲಹೆ ಮಾರ್ಗಸೂಚಿಗಳನ್ನು ಸುತ್ತೋಲೆ ಮುಖಾಂತರ ನೀಡಲಾಗಿರುತ್ತದೆ. ಹಾಗೂ ಪ್ರತೀ ವಾರ ಪ್ರಗತಿ ಪರಿಶೀಲನೆ ನಡೆಸಲಾಗುತ್ತಿದೆ. ಮೇಲ್ಕಂಡಂತೆ ಗ್ರಾಮೀಣ ಪ್ರದೇಶ, ಪಟ್ಟಣ, ನಗರ ಹಾಗೂ ಬೃಹತ್ ಬೆಂಗಳೂರನ್ನು ಒಳಗೊಂಡಂತೆ ಎಲ್ಲಾ ಪ್ರದೇಶಗಳಲ್ಲೂ ಕಾರ್ಡ್ ವಿತರಣೆ ಜಾರಿಯಲ್ಲಿರುತ್ತದೆ.

ಆಕುಕ 84 ಎಸ್‌ಬಿವಿ 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 106ಕ್ಕೆ ಅನುಬಂಧ

ಆಯುಷ್ಮಾನ್ ಭಾರತ್-ಅರೋಗ್ಯ ಕರ್ನಾಟಕ

ರಾಜ್ಯ ಸರ್ಕಾರವು ಆಯುಷ್ಮಾನ್ ಭಾರತ್-ಅರೋಗ್ಯ ಕರ್ನಾಟಕ ಎಂಬ ಸಂಯೋಜಿತ ಯೋಜನೆಯನ್ನು ಭರವಸೆ ಮಾದರಿಯಲ್ಲಿ ದಿ:30.10.2018ರಿಂದ ಅನುಷ್ಠಾನಗೊಳಿಸಿದೆ.

ಯೋಜನೆಯ ರೂಪುರೇಷೆಗಳು:

1. ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆ ಅಡಿಯಲ್ಲಿ ಒಟ್ಟು 1650 ನಿರ್ದಿಷ್ಟ ಚಿಕಿತ್ಸಾ ವಿಧಾನಗಳಿಗೆ ಚಿಕಿತ್ಸೆ ನೀಡಲಾಗುತ್ತದೆ.
2. ಪಡಿತರ ಕಾರ್ಡ್ ಮತ್ತು ಆಧಾರ್ ಕಾರ್ಡ್‌ಗಳು ಯೋಜನೆಯ ಅರ್ಹತಾ ಮಾನದಂಡಗಳಾಗಿವೆ.
3. ಯೋಜನೆಯ ಫಲಾನುಭವಿಗಳನ್ನು ಅರ್ಹತಾ ರೋಗಿ ಮತ್ತು ಸಾಮಾನ್ಯ ರೋಗಿ ಎಂದು ಎರಡು ವರ್ಗಗಳಾಗಿ ವಿಂಗಡಿಸಲಾಗಿದೆ.

ಅ) ಅರ್ಹತಾ ರೋಗಿ: ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ, 2013ರಡಿ (ಬಿಪಿಎಲ್) "ಅರ್ಹ ಕುಟುಂಬ"ಕ್ಕೆ ಸೇರಿರುವರು ಹಾಗೂ ಈ ಹಿಂದೆ ಚಾಲ್ತಿಯಲ್ಲಿದ್ದ ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆಯಡಿಯಲ್ಲಿ ನೋಂದಾಯಿತಗೊಂಡಿರುವ ಕುಟುಂಬಗಳಿಗೆ ಒಂದು ವರ್ಷಕ್ಕೆ ಒಂದು ಕುಟುಂಬಕ್ಕೆ ರೂ.5.00 ಲಕ್ಷಗಳ ವರೆಗೆ ಉಚಿತ ಚಿಕಿತ್ಸೆ ಒದಗಿಸಲಾಗುವುದು.

ಆ) ಸಾಮಾನ್ಯರೋಗಿ: ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ, 2013ರಡಿ "ಅರ್ಹ ಕುಟುಂಬಕ್ಕೆ" ಸೇರಿಲ್ಲದೇ ಇರುವವರು. ಇವರಿಗೆ ಸರ್ಕಾರಿ ಪ್ಯಾಕೇಜ್ ದರದ ಶೇ.30% ರಷ್ಟು ಇದ್ದು, ಸಹ-ಪಾವತಿಯ ಆಧಾರದ ಮೇಲೆ ಒಂದು ವರ್ಷಕ್ಕೆ ಒಂದು ಕುಟುಂಬಕ್ಕೆ ರೂ.1.50 ಲಕ್ಷ ಇರುತ್ತದೆ.

4. ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆ ಅಡಿಯಲ್ಲಿ "ಎಬಿ-ಎಆರ್‌ಕೆ" ಕಾರ್ಡ್‌ನ್ನು ಸಾರ್ವಜನಿಕ ಆರೋಗ್ಯ ಸಂಸ್ಥೆಗಳಲ್ಲಿ ರೂ.10/- ಶುಲ್ಕದೊಂದಿಗೆ ನೀಡಲಾಗುತ್ತದೆ.

5. ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್, ಸೇವಾ ಸಿಂಧು ಹಾಗೂ ಬಾಪೂಜಿ ಕೇಂದ್ರಗಳಲ್ಲಿ ರೂ.10/- ಶುಲ್ಕದೊಂದಿಗೆ ಎ4 ಅಳತೆಯ ಕಾಗದದಲ್ಲಿ ಹಾಗೂ ರೂ.35/- ಶುಲ್ಕದೊಂದಿಗೆ ಪ್ಲಾಸ್ಟಿಕ್ ಕಾರ್ಡ್‌ನಲ್ಲಿ "ಎಬಿ-ಎಆರ್‌ಕೆ" ಕಾರ್ಡ್ ಪಡೆದುಕೊಳ್ಳಬಹುದು.

6. ರೋಗಿಗಳು ತಮ್ಮ ಪಡಿತರ ಚೀಟಿ ಮತ್ತು ಆಧಾರ್ ಕಾರ್ಡ್‌ನೊಂದಿಗೆ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಹೋಗಿ ತಪಾಸಣೆ ಮಾಡಿಸಿಕೊಳ್ಳಬೇಕು. ಅದೇ ಸರ್ಕಾರಿ ಆಸ್ಪತ್ರೆಯು ಚಿಕಿತ್ಸೆ ನೀಡುವ ಸಾಮರ್ಥ್ಯ ಹೊಂದಿದ್ದಲ್ಲಿ ಅಲ್ಲಿಯೇ ರೋಗಿಗೆ ಚಿಕಿತ್ಸೆ ನೀಡಲಾಗುವುದು.

7. ಸದರಿ ಸರ್ಕಾರಿ ಆಸ್ಪತ್ರೆಯು ಚಿಕಿತ್ಸೆ ನೀಡುವ ಸಾಮರ್ಥ್ಯವನ್ನು ಹೊಂದಿಲ್ಲದಿದ್ದರೆ ರೆಫರಲ್ ನೀಡಲಾಗುತ್ತದೆ. ರೆಫರಲ್ ಪಡೆದುಕೊಂಡ ರೋಗಿಯು ತಾನು ಇಚ್ಛಿಸುವ ಯಾವುದೇ ನೋಂದಾಯಿತ ಖಾಸಗಿ ಅಥವಾ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬಹುದು.

8. ತುರ್ತು ಚಿಕಿತ್ಸೆಗಳಿಗೆ ಯಾವುದೇ ರೆಫರಲ್ ಇಲ್ಲದೆ ನೇರವಾಗಿ ನೋಂದಾಯಿತ ಖಾಸಗಿ ಅಥವಾ ಸರ್ಕಾರಿ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಬಹುದು.

ಅಂಗಾಂಗ ಕಸಿ ಯೋಜನೆ:

G.O.No .HFW 64 FPE 2018, ದಿ:03.12.2018 ಆದೇಶದನ್ವಯ ಕರ್ನಾಟಕ ರಾಜ್ಯದ ಬಡ/ಬಿಪಿಎಲ್ ರೋಗಿಗಳಿಗೆ ಕಿಡ್ನಿ, ಲಿವರ್ ಹಾಗೂ ಹೃದಯ ಅಂಗಾಂಗ ಕಸಿ ಯೋಜನೆಯನ್ನು ಜಾರಿಗೆ ತಂದಿದೆ.

ಯೋಜನೆಯ ರೂಪುರೇಷೆಗಳು:

1. ಈ ಯೋಜನೆಯು ಕರ್ನಾಟಕ ರಾಜ್ಯದ ಬಡವರು/ಬಿಪಿಎಲ್ ರೋಗಿಗಳನ್ನು ಬಿಪಿಎಲ್ ಕಾರ್ಡ್ ಮತ್ತು ಆಧಾರ್ ಕಾರ್ಡ್‌ಗಳ ಆಧಾರದಲ್ಲಿ ಗುರುತಿಸಲಾಗುವುದು.

2. ಫಲಾನುಭವಿಯು ಸಾರ್ವಜನಿಕ ಆರೋಗ್ಯ ಸಂಸ್ಥೆ (ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋಯುರಾಲಜಿ, ಶ್ರೀ ಜಯದೇವ ಇನ್‌ಸ್ಟಿಟ್ಯೂಟ್ ಆಫ್ ಕಾರ್ಡಿಯೋಲಜಿ, ಪಿ.ಎಂ.ಎಸ್.ಎಸ್.ವೈ, ಇನ್‌ಸ್ಟಿಟ್ಯೂಟ್ ಆಫ್ ಗ್ಯಾಸ್ಟ್ರೋ ಎಂಟೆರಾಲಜಿ)ಗಳಿಗೆ ಭೇಟಿ ನೀಡಬೇಕು ಮತ್ತು ಮೌಲ್ಯಮಾಪನದ ನಂತರ ಅಂಗಾಂಗ ಕಸಿಗೆ ಸಂಬಂಧಿಸಿದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ನೋಂದಣಿ ಮಾಡಲು ಆಸ್ಪತ್ರೆಯ ಅಧಿಕೃತ ಸಮಿತಿಯಿಂದ (ಆಸ್ಪತ್ರೆ ಮಟ್ಟದ/ಜಿಲ್ಲಾ/ರಾಜ್ಯಮಟ್ಟದ) ಅನುಮೋದನೆ ಪಡೆಯಬೇಕು.

3. ಮೃತದೇಹ/ಮೆದುಳು ನಿಷ್ಕ್ರಿಯಗೊಂಡವರಿಂದ ಹಾಗೂ ಜೀವಂತ ದಾನಿಗಳಿಂದ ಅಥವಾ ಹತ್ತಿರದ ಸಂಬಂಧಿಯಿಂದ ಅಂಗಾಂಗ ದಾನ ಪಡೆದುಕೊಂಡಾಗ ಅಂತಹ ಅಂಗಾಂಗ ಕಸಿ ಶಸ್ತ್ರ ಚಿಕಿತ್ಸೆಯನ್ನು ನೋಂದಾಯಿತ ಸರ್ಕಾರಿ ಆಸ್ಪತ್ರೆಗಳಲ್ಲಿ ಮಾಡಲಾಗುವುದು.

4. ಒಂದೊಮ್ಮೆ ಮೇಲೆ ತಿಳಿಸಲಾದ ಸರ್ಕಾರಿ ಆಸ್ಪತ್ರೆಗಳಿಗೆ ಅಂಗಾಂಗ ಕಸಿ ಶಸ್ತ್ರ ಚಿಕಿತ್ಸೆ ಮಾಡುವ ಸಾಮರ್ಥ್ಯ ಇಲ್ಲದಿದ್ದಲ್ಲಿ ನೋಂದಾಯಿತ ಖಾಸಗಿ ಆಸ್ಪತ್ರೆಗಳಿಗೆ ರೆಫರಲ್ ಮಾಡಬಹುದು.

5. ಮೃತ ಶರೀರ (ಮೆದುಳು ನಿಷ್ಕ್ರೀಯಗೊಂಡ) ಕಸಿ ಪ್ರಕರಣದಲ್ಲಿ ಅಂಗಾಂಗ ಪುನರ್ ಕೇಂದ್ರದಲ್ಲಿ ಸ್ವೀಕರಿಸುವವರ ಮತ್ತು ಲಭ್ಯತೆಯ ನೋಂದಣಿ ಪ್ರಕಾರ ಸರ್ಕಾರಿ ಅಥವಾ ಖಾಸಗಿ ನೋಂದಾಯಿತ ಆಸ್ಪತ್ರೆಗಳಲ್ಲಿ ಅಂಗಾಂಗ ಕಸಿ ಶಸ್ತ್ರ ಚಿಕಿತ್ಸೆಯನ್ನು ನಡೆಸಬಹುದು.

6. ಚಿಕಿತ್ಸಾ ವಿಧಾನಗಳ ಪೂರ್ವಾನುಮತಿ ಪ್ರಕ್ರಿಯೆ ಮತ್ತು ಸ್ವೀಕರಿಸುವ ಬಿಪಿಎಲ್/ಬಡವರು ಮುಂತಾದ ಅನ್ವಯಿಸುವ ಸ್ಥಿತಿಗತಿಗಳ ಕುರಿತಂತೆ ಜೀವ ಸಾರ್ಥಕತೆ ಸೊಸೈಟಿಯ ಹಂಚಿಕೆ ನೀತಿಯನ್ನು ಅನುಸರಿಸಲಾಗುವುದು.

7. ರೋಗಿಗಳು ನಿರ್ದಿಷ್ಟ ಅಂಗಕ್ಕಾಗಿ ಆನ್‌ಲೈನ್ ಮೂಲಕ ಜೀವ ಸಾರ್ಥಕತೆಯಲ್ಲಿ (http:// www.jeevasarthaka.karnataka.gov.in) ಮೃತದೇಹ / ಮೆದುಳು ನಿಷ್ಕ್ರೀಯಗೊಂಡವರ ಅಂಗಾಂಗ ಕಸಿ ಕಾರ್ಯಕ್ರಮದ ಅಡಿಯಲ್ಲಿ ನೋಂದಣಿ ಮಾಡಬಹುದು.